7	ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ	694
8	ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ	4692
9	ತೋಟಗಾರಿಕೆ ಇಲಾಖೆ	728
10	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ	2
11	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ	2595
12	ಕೃಷಿ ಇಲಾಖೆ	72
13	ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ	83
14	ಶಿಕ್ಷಣ ಇಲಾಖೆ	595
15	ಒಳಾಡಳಿತ ಇಲಾಖೆ	3
16	ಕಂದಾಯ ಇಲಾಖೆ	30
17	ಆರ್ಥಿಕ ಇಲಾಖೆ	348
18	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ	18
19	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ	166
20	ಸಮಾಜ ಕಲ್ಯಾಣ ಇಲಾಖೆ	928
	ಒಟ್ಟು	**14918**

470 ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಮತಕ್ಷೇತ್ರದ ಕಿತ್ತೂರು ಮತ್ತು ಎಂ.ಕೆ. ಹುಬ್ಬಳ್ಳಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು;

ಇ) ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಅನುಸರಿಸಲಾಗುವ ಮಾನದಂಡಗಳೇನು?

(ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) 2001ರ ಜನಗಣತಿಯನ್ವಯ 10,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಒಟ್ಟು 247 ಗ್ರಾಮಗಳ ಪಟ್ಟಿಯನ್ನು, ಆ ಗ್ರಾಮಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಪರಿವರ್ತಿಸುವ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನಗರಾಭಿವೃದ್ಧಿ ಇಲಾಖೆಗೆ ಕರ್ನಾಟಕ ಮುನಿಸಿಪಾಲಿಟೀಸ್ ಅಧಿನಿಯಮದ ಪ್ರಕರಣದ 349ರನ್ವಯ ಪರಿಶೀಲಿಸಿ ಅಭಿಪ್ರಾಯ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದೆ. ಸದರಿ ಪ್ರಸ್ತಾವನೆಯಲ್ಲಿ ಕಿತ್ತೂರು ಮತಕ್ಷೇತ್ರದ ಕಿತ್ತೂರು ಮತ್ತು ಎಂ.ಕೆ. ಹುಬ್ಬಳ್ಳಿ ಗ್ರಾಮಗಳು ಸೇರಿದೆ.

ಆ) ಕರ್ನಾಟಕ ಪುರಸಭೆ ಕಾಯ್ದೆ, 1964ರ ಕಲಂ 3 ಮತ್ತು 349 ರನ್ವಯ ವಿಷಯವನ್ನು ನಿಯಮಾನುಸಾರ ಪರಿಶೀಲಿಸಿ ಆರ್ಥಿಕ ಹಾಗೂ ಆಡಳಿತಾತ್ಮಕ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.

ಇ) ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 3ರ ಉಪ ಕಲಂ (1)ರ (ಎ) (ಬಿ) (ಸಿ) ಲ (ಇ) ಮತ್ತು (ಎಫ್) ಮತ್ತು ಕಲಂ 9 ರಲ್ಲಿ ಓದಿಕೊಂಡಂತೆ ಕಲಂ 349ರನ್ವಯ ಯಾವುದೇ ಒಂದು ಪ್ರದೇಶವನ್ನು ಪರಿವರ್ತಿತ ಪ್ರದೇಶವೆಂದು ಉದ್ಘೋಷಿಸಲು ಈ ಕೆಳಕಂಡ ಲಕ್ಷಣಗಳನ್ನು ಹೊಂದಿರಬೇಕಾಗುತ್ತದೆ.

1. ಅಂತಹ ಪ್ರದೇಶದ ಜನಸಂಖ್ಯೆಯು ಹತ್ತು ಸಾವಿರಕ್ಕಿಂತ ಕಡಿಮೆ ಇಲ್ಲದಿರುವುದನ್ನು ಮತ್ತು ಇಪ್ಪತ್ತು ಸಾವಿರಕ್ಕಿಂತ ಕಡಿಮೆ ಇರುವುದನ್ನು;
2. ಅಂಥ ಪ್ರದೇಶದಲ್ಲಿ ಜನಸಾಂದ್ರತೆಯ ಒಂದು ಚದುರ ಕಿಲೋ ಮೀಟರ್ ವಿಸ್ತೀರ್ಣಕ್ಕೆ ನಾಲ್ಕು ನೂರಕ್ಕಿಂತ ಕಡಿಮೆಯಿಲ್ಲದಿರುವುದನ್ನು;
3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗ

ಪ್ರಮಾಣದ ಶೇಕಡಾ ಐವತ್ತಕ್ಕಿಂತ ಕಡಿಮೆ ಇಲ್ಲದಿರುವುದನ್ನು.

ಯಾವುದೇ ಒಂದು ಪ್ರದೇಶವು ತಾಲ್ಲೂಕ್ ಕೇಂದ್ರ ಸ್ಥಳವಾಗಿದ್ದಲ್ಲಿ ಅಂತಹ ಸ್ಥಳದ ಜನಸಂಖ್ಯೆಯು ಹತ್ತು ಸಾವಿರಕ್ಕಿಂತ ಕಡಿಮೆ ಇದ್ದಾಗ್ಯೂಸಹ, ರಾಜ್ಯಪಾಲರು ಅಂತಹ ಪ್ರದೇಶವನ್ನು ಪರಿವರ್ತಿತ ಪ್ರದೇಶವೆಂದು ಉದ್ಘೋಷಿಸಬಹುದಾಗಿದೆ.

593 ಶ್ರೀ ಪುಟ್ಟರಾಜು ಸಿ.ಎಸ್. (ಮೇಲುಕೋಟೆ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪಾಂಡವಪುರ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

(ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

6 ಶ್ರೀ ವಸಂತಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಉಜಿರೆ ಮತ್ತು ಚಾರ್ಮಡಿ ಗ್ರಾಮ ಪಂಚಾಯತ್‌ಗಳನ್ನು ನಗರ ಪಂಚಾಯತ್‌ಗಳನ್ನಾಗಿ ಮಾರ್ಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ದಿಸೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?